# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಕೆ.ಆರ್.ಪುರ ಉಪವಲಯ, ಮಹದೇವಪುರ ವಲಯ, ಬೆಂಗಳೂರು–560036.

ಸಂಖ್ಯೆ:ಬಿಬಿಎಂಪಿ/ಸ.ಕಾ.ಅ/ಕೆ.ಆರ್.ಪಿ.ಉವ/ಪಿಆರ್/ /2022–23 ದಿನಾಂಕ: 03–12–2022

ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020–21 ದಿನಾಂಕ: 21–09–2020 ರಂತೆ ದಿನಾಂಕ: 03–12–2022 ರಂದು ಹೊಸ ದೇವಸಂದ್ರ ವಾರ್ಡ ನಂ: 89 ವಾರ್ಡ್ ಕಮಿಟಿ ಸಭೆಯನ್ನು ವಾರ್ಡ್ ಕಛೇರಿಯಲ್ಲಿ ಶ್ರೀ.ಕೇಶವ್, ಸಹಾಯಕ ಅಭಿಯಂತರರು ಹಾಗೂ ನೋಡಲ್ ಅಧಿಕಾರಿಗಳು, ರವರ ಅಧ್ಯಕ್ಷತೆಯಲ್ಲಿ ನಡೆದಿರುವ ಸಭೆಯ ನಡುವಳಿಗಳು:

## "ಸಭೆಯಲ್ಲಿ ಚರ್ಚಿಸಲಾದ ವಿಷಯಗಳು"

| ಕ್ರಮ ಸಂಖ್ಯೆ | ವಿಷಯ | ತೀರ್ಮಾನ |
|---|---|---|
| 1 | ಬೀದಿ ದೀಪಗಳ ನಿರ್ವಹಣೆ ಬಗ್ಗೆ. | ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು, ಗೀತಾ ಕ್ಲಿನಿಕ್ ರಸ್ತೆ ಹಾಗೂ R.R.Temple ರಸ್ತೆಯಲ್ಲಿರುವ ಬೀದಿ ದೀಪಗಳು ಹಾಳಾಗಿದ್ದು, ಹೊಸದಾಗಿ ಬೀದಿ ದೀಪಗಳನ್ನು ಅಳವಡಿಸಿಕೊಡುವಂತೆ ಸಭೆಯಲ್ಲಿ ಕೋರಿದರು. ಇದಕ್ಕೆ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರು ಕೂಡಲೇ ಬಗೆಹರಿಸುವುದಾಗಿ ತಿಳಿಸಿದರು. |
| 2 | ರಸ್ತೆಯನ್ನು ತೆರವುಗೊಳಿಸುವ ಬಗ್ಗೆ. | ಟೆಂಟ್ ರಸ್ತೆಯಲ್ಲಿ ಆಟೋ ಗ್ಯಾರೇಜ್‌ಗಳಿದ್ದು, ಮೆಕಾನಿಕ್ ಸಂಬಂಧಿತ ಕಾಮಗಾರಿಯನ್ನು ರಸ್ತೆ ಬದಿಯಲ್ಲೇ ಕೈಗೊಳ್ಳುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು ಹಾಗೂ ಸದರಿ ರಸ್ತೆಯಲ್ಲಿ ಬೀದಿ ವ್ಯಾಪಾರಿಗಳು ರಸ್ತೆಯನ್ನು ಒತ್ತುವರಿ ಮಾಡಿದ್ದು, ಕೂಡಲೇ ರಸ್ತೆಯನ್ನು ತೆರವುಗೊಳಿಸುವುದಾಗಿ ತಿಳಿಸಿದರು. ಇದಕ್ಕೆ ಸಭೆಯಲ್ಲಿ ಹಾಜರಿದ್ದ ವಾರ್ಡ್ ಅಭಿಯಂತರರು ಸಂಚಾರ ಪೊಲೀಸ್‌ರೊಂದಿಗೆ ಸಮನ್ವಯ ಸಾಧಿಸಿ ರಸ್ತೆಯನ್ನು ತೆರವುಗೊಳಿಸವುದಾಗಿ ತಿಳಿಸಿದರು. |
| 3. | ಟ್ರಾನ್ಸ್ಫಾರ್ಮರ್‌ಗೆ ಸಂಬಂಧಿಸಿದ ದೂರು. | ವೆಂಕಟೇಶ್ವರ ಥಿಯೇಟರ್ ಬಳಿಯಿರುವ ಟ್ರಾನ್ಸ್ಫಾರ್ಮರ್ ಸುತ್ತಲು ಅಶುಚಿತ್ವವಾಗಿದ್ದು, ಇದನ್ನು ತಡೆಯಲು ಟ್ರಾನ್ಸ್ಫಾರ್ಮರ್ ಸುತ್ತಲು ಫೆನ್ಸಿಂಗ್ ಹಾಕಿಸುವಂತೆ ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಇಲಾಖೆಯ ಸಹಾಯಕ ಅಭಿಯಂತರರಿಗೆ ತಿಳಿಸಿದರು. ಇದಕ್ಕೆ ಅಧಿಕಾರಿಗಳು ಕೂಡಲೇ ಸಮಸ್ಯೆಗೆ ಪರಿಹಾರ ನೀಡುವುದಾಗಿ ತಿಳಿಸಿದರು.<br><br>ತ್ರಿವೇಣಿನಗರದ ಸ್ಕೂಲ್ ಬಳಿಯಲ್ಲಿರುವ ಟ್ರಾನ್ಸ್ಫಾರ್ಮರ್‌ನ್ನು ವರ್ಗಾಯಿಸುವಂತೆ ಕೇಳಿದರು.ಅಲ್ಲಿ ಶಾಲಾ ಮಕ್ಕಳು ಓಡಾಡುತ್ತಿದ್ದು, ಅಪಾಯವಾಗುವ ಸಾಧ್ಯತೆಗಳಿದ್ದು ಹಾಗಾಗಿ ಕೂಡಲೇ ಟ್ರಾನ್ಸ್ಫಾರ್ಮರ್‌ನ್ನು ವರ್ಗಾಯಿಸುವುದು ಉತ್ತಮ ಎಂದು ತಿಳಿಸಿದರು. ಇದಕ್ಕೆ ಬೆಸ್ಕಾಂ ಅಧಿಕಾರಿಗಳು ಕೂಡಲೇ ಸಮಸ್ಯೆಗೆ ಪರಿಹಾರ ನೀಡುವುದಾಗಿ ತಿಳಿಸಿದರು. |
| 4. | ವಿದ್ಯುತ್ ಕಂಬದ ಕುರಿತು ದೂರು. | • ದೇವಸಂದ್ರದ ಹೈಸ್ಕೂಲ್ ಬಳಿ ವಿದ್ಯುತ್ ಕಂಬವು ಹಾನಿಯಾಗಿದ್ದು, ಕೂಡಲೇ ಕಂಬವನ್ನು ದುರಸ್ತಿಗೊಳಿಸುವಂತೆ ಕೋರಿದರು. ಇದು ತುಂಬಾ ಅಪಾಯಕಾರಿವಾಗಿದ್ದು ಆದಷ್ಟು ಬೇಗಾ ಸಮಸ್ಯೆ ಪರಿಹರಿಸುವಂತೆ ಕೋರಿದರು. ಇದಕ್ಕೆ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರು ಕೂಡಲೇ ಬಗೆಹರಿಸುವುದಾಗಿ ತಿಳಿಸಿದರು.<br><br>• ಸಂಜಯನಗರದಲ್ಲಿ ವಿದ್ಯುತ್ ಕಂಬವನ್ನು ದುರಸ್ತಿಗೊಳಿಸುವಂತೆ ಕೋರಿದರು ಹಾಗೂ ofc cable ಗಳು ಮನೆಯ ಮೇಲೆ ಜೋತಾಡುತ್ತಿರುವ ಬಗ್ಗೆ ತಿಳಿಸಿದರು. ಅಪಘಾತವನ್ನು ತಡೆಯಲು ಕೂಡಲೇ ಕ್ರಮವಹಿಸಲು ತಿಳಿಸಿದರು. |

| | | |
|---|---|---|
| 5. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿದ ದೂರುಗಳು. | • ದೇವಸಂದ್ರ ವಾರ್ಡ್‌ನಲ್ಲಿ ನೀರಿನ ಸರಬರಾಜನ್ನು ನಿರ್ದಿಷ್ಟ ಸಮಯಕ್ಕೆ ಒದಗಿಸುವಂತೆ ಕೋರಿದರು.ಇದರಿಂದ ಯಾವುದೇ ರೀತಿಯ ನೀರಿನ ಸಮಸ್ಯೆ ಎದುರಾಗುವುದಿಲ್ಲ ಎಂದು ಸಭೆಯಲ್ಲಿ ತಿಳಿಸಿದರು.<br>• ಸಂಜಯನಗರದಲ್ಲಿ ಕಾವೇರಿ ನೀರು ಕಲುಶಿತಗೊಂಡಿದ್ದು, ಸಾರ್ವಜನಿಕರಿಗೆ ತುಂಬಾ ಸಮಸ್ಯೆ ಎದುರಾಗುತ್ತಿದೆ.ಇದರಿಂದ ಸಾರ್ವಜನಿರ ಆರೋಗ್ಯ ಸ್ಥಿತಿ ಕೂಡ ಹದಗೆಡುವ ಸಾಧ್ಯತೆವಿರುತ್ತದೆ.<br>• ಸಂಜಯನಗರದ ರಾಜಕಾಲುವೆಯ Underground drainage pipe ಹಾಳಗಿರುವುದಾಗಿ ತಿಳಿಸಿದರು.ಈ ಮೇಲಿನ ಎಲ್ಲಾ ಸಮಸ್ಯೆಗಳು ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಿಸಿದ್ದು ಕೂಡಲೇ ಸಮಸ್ಯೆಗಳನ್ನು ಪರಿಹರಿಸಲು ತಿಳಿಸಿದರು. |
| 6. | ಡಾಂಬರೀಕರಣ ಮಾಡುವಂತೆ. | ವಿಜಯ ಬ್ಯಾಂಕ್‌ನಿಂದ ಜಿಆರ್‌ಟಿ ವರೆಗೂ ರಸ್ತೆಯು ಹಾಳಾಗಿದ್ದು, ವಾಹನ ಸಂಚಾರಕ್ಕೆ ಸಮಸ್ಯೆ ಉಂಟಾಗುತ್ತಿದೆ.ಹಾಗಾಗಿ ಸದರಿ ರಸ್ತೆಯನ್ನು ಡಾಂಬರೀಕರಣಗೊಳಿಸುವಂತೆ ಕೋರಿದರು.ಸದರಿ ರಸ್ತೆಯು ರಸ್ತೆ ಮೂಲಭೂತ ಸೌಕರ್ಯ ಇಲಾಖೆಗೆ ಸೇರಿದ್ದು ಕೂಡಲೇ ಕ್ರಮವಹಿಸುವಂತೆ ತಿಳಿಸಿದರು. |

ವಾರ್ಡ್ ಕಮಿಟಿ ನೋಡಲ್ ಅಧಿಕಾರಿ ಮತ್ತು ಕಾರ್ಯದರ್ಶಿಗಳು, ನೌಕರರು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಈ ಮೇಲ್ಕಂಡಂತೆ ತಿಳಿಸಿರುವ ಸಭೆಯಲ್ಲಿ ಕೈಗೊಂಡ ತೀರ್ಮಾನದಂತೆ ಹಾಗೂ ನಿರ್ಣಯಗಳಂತೆ ದೇವಸಂದ್ರ ವಾರ್ಡ ನಂ: 89 ವ್ಯಾಪ್ತಿಯಲ್ಲಿ ಕೆಲಸ ಕಾರ್ಯಗಳನ್ನು ಆದ್ಯತೆ ಮೇರೆಗೆ ನಿರ್ವಹಿಸಲು ನಿರ್ಣಯಿಸಲಾಯಿತು.

ದೇವಸಂದ್ರ ವಾರ್ಡ ನಂ: 89 ರ ವಾರ್ಡ್ ಕಮಿಟಿಯ ಕಾರ್ಯದರ್ಶಿಗಳಾದ ಸಹಾಯಕ ಅಭಿಯಂತರರು, ರವರು ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಕಾರ್ಯನಿರ್ವಹಿಸಲು ಕೋರುತ್ತಾ, ವಂದನಾರ್ಪಣೆಯನ್ನು ಸಲ್ಲಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಕಾರ್ಯದರ್ಶಿ
ಸಹಾಯಕ ಅಭಿಯಂತರರು
ವಾರ್ಡ್ ನಂ: 89

**ಪ್ರತಿಯನ್ನು**

1. ಮಾನ್ಯ ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ, ಮಹದೇವಪುರ ವಲಯ, ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು, ಬಿ.ಬಿ.ಎಂ.ಪಿ, ಮಹದೇವಪುರ ವಲಯ, ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಡಿ.ಹೆಚ್.ಓ ಬಿ.ಬಿ.ಎಂ.ಪಿ, ಮಹದೇವಪುರ ವಲಯ, ರವರ ಸೂಕ್ತ ಮಾಹಿತಿ/ಕ್ರಮಕ್ಕಾಗಿ ಸಲ್ಲಿಸಿದೆ.
4. ಎಲ್ಲಾ ಅಧಿಕಾರಿ ಸಿಬ್ಬಂದಿಗಳ ಕ್ರಮಕ್ಕಾಗಿ.
5. ಎಲ್ಲಾ ಕಮಿಟಿ ಸದಸ್ಯರುಗಳ ಮಾಹಿತಿಗಾಗಿ ಸಲ್ಲಿಸಿದೆ.
6. ಕಛೇರಿ ಪ್ರತಿ.